**SEPTEMBER 20, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು;**

- **ಕರ್ನಾಟಕ ಸುವರ್ಣ ಸಂಭ್ರಮ ಸಮಾರೋಪ ಸಮಾರಂಭವನ್ನು ಕನ್ನಡ ಜನೋತ್ಸವವಾಗಿ ಆಚರಿಸಲು ನಿರ್ಧಾರ– ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಪಶ್ಚಿಮ ಘಟ್ಟ ಸಂರಕ್ಷಣೆಗೆ ಕಸ್ತೂರಿ ರಂಗನ್ ವರದಿ ಜಾರಿಗೆ ಜನಪ್ರತಿನಿಧಿಗಳ ಸಭೆಯಲ್ಲಿ ಸಮ್ಮತಿ– ಸಚಿವ ಈಶ್ವರ ಖಂಡ್ರೆ**
- **ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಸುಧಾರಣೆಗೆ ಉನ್ನತ ಮಟ್ಟದ ಸಮಿತಿ ರಚನೆ ಮಾಡುವುದು ಅಗತ್ಯ – ಸಚಿವ ಎಚ್.ಕೆ.ಪಾಟೀಲ.**
- **ಶ್ರೀರಂಗಪಟ್ಟಣ ದಸರಾ ವಿಜೃಂಭಣೆಯಿಂದ ಆಚರಿಸಲು ನಿರ್ಧಾರ– ಸಚಿವ ಎನ್. ಚಲುವರಾಯಸ್ವಾಮಿ**

**ವಾರ್ತೆಗಳ ವಿವರ**

<><><>

**ಕರ್ನಾಟಕ ಸುವರ್ಣ ಸಂಭ್ರಮ ಸಮಾರೋಪ ಸಮಾರಂಭವನ್ನು ಕನ್ನಡ ಜನೋತ್ಸವವಾಗಿ ಆಚರಿಸಲು ನಿರ್ಧರಿಸಲಾಗಿದೆ. ಕನ್ನಡ ಭಾ ೆ, ಸಂಸ್ಕೃತಿ, ಸಂಗೀತ, ಸಾಹಿತ್ಯ, ಜನಪದ, ಚರಿತ್ರೆ ಎಲ್ಲದರ ಮಹತ್ವ ಸಾರಲು ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ನಾಡಿನ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ಕೊಡ ಮಾಡುವ ರಾಜ್ಯೋತ್ಸವ ಪ್ರಶಸ್ತಿ ಹಾಗೂ ಕರ್ನಾಟಕ ಸುವರ್ಣ ಸಂಭ್ರಮ 50ರ ಸಮಾರೋಪ ಸಮಾರಂಭದ ಕುರಿತು ನಡೆದ ಉನ್ನತ ಮಟ್ಟದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ರಾಜ್ಯೋತ್ಸವ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಇದೇ 30ರವರೆಗೆ ಕಾಲಾವಕಾಶ ಕಲ್ಪಿಸಲಾಗಿದ್ದು, ಈ ಬಾರಿ 69 ಮಂದಿಗೆ ಪ್ರಶಸ್ತಿ ನೀಡಲಾಗುವುದು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ಪ್ರಶಸ್ತಿ ಆಯ್ಕೆಗೆ ಸಮಿತಿ ರಚಿಸಲಾಗಿದೆ ಎಂದರು. ವಿಧಾನಸೌಧದ ಆವರಣದಲ್ಲಿ 25 ಅಡಿ ಎತ್ತರ ಭುವನೇಶ್ವರಿ ದೇವಿ ಕಂಚಿನ ಪ್ರತಿಮೆ ಕಾಮಗಾರಿ ಪ್ರಗತಿಯಲ್ಲಿದ್ದು, ನವೆಂಬರ್ ಒಂದರಂದು ಅನಾವರಣ ಮಾಡಲಾಗುವುದು. ಮೈಸೂರು ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಪ್ರತಿಮೆ ಸ್ಥಾಪನೆ ಸಂಬಂಧ ಕಾಮಗಾರಿ ಪ್ರಗತಿಯಲ್ಲಿದೆ.**

ಧಾರವಾಡದಲ್ಲಿ ಅದರಗುಂಚಿ ಶಂಕರಗೌಡ ಸ್ಮಾರಕ ನಿರ್ಮಿಸಲು ಅಂದಾಜು ವೆಚ್ಚ ಸಲ್ಲಿಸಲಾಗಿದೆ. ಗದಗದಲ್ಲಿ ಅಂದಾನಪ್ಪ ದೊಡ್ಡ ಮೇಟಿ ಸ್ಮಾರಕ ನಿರ್ಮಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಎಲ್ಲಾ ಜಿಲ್ಲೆ ಹಾಗೂ ತಾಲೂಕುಗಳಲ್ಲಿ ಕರ್ನಾಟಕ ಸುವರ್ಣ ಸಂಭ್ರಮ ನಡೆಯುತ್ತಿದ್ದು, ಹಂಪಿಯಿಂದ ಆರಂಭವಾದ ಕನ್ನಡ ರಥ ಯಾತ್ರೆ ಈಗಾಗಲೇ 28 ಜಿಲ್ಲೆಗಳಲ್ಲಿ ಸಾಗಿದ್ದು, ರಥಯಾತ್ರೆಯ ಸಮಾರೋಪ ಸಮಾರಂಭ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ನಡೆಯಲಿದೆ ಎಂದರು.

<><><>

ಕಲಾವಿದರ ಮಾಸಾಶನವನ್ನು 3000 ರೂಪಾಯಿಗೆ ಏರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಕರ್ನಾಟಕ ನಾಟಕ ಅಕಾಡೆಮಿಯಿಂದ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ; 2022, 2023, 2024ನೇ ಸಾಲಿನ ವಾರ್ಷಿಕ ನಾಟಕ ಪ್ರಶಸ್ತಿಗಳನ್ನು ವಿತರಿಸಿ ಮಾತನಾಡಿದ ಅವರು; ತಮ್ಮ ಸರ್ಕಾರ ನಿರಂತರವಾಗಿ ಕಲೆ, ಸಾಹಿತ್ಯ, ಸಂಸ್ಕೃತಿ ರಂಗಭೂಮಿಯನ್ನು ಬೆಂಬಲಿಸಿಕೊಂಡು ಬಂದಿದೆ. ಅಕಾಡೆಮಿಗಳಿಗೆ ಕೊಡುತ್ತಿದ್ದ ಅನುದಾನದ ಮೊತ್ತವನ್ನು ಈ ಹಿಂದಿನ ಸರ್ಕಾರ ಕಡಿಮೆ ಮಾಡಿತ್ತು. ಅದನ್ನು ಮತ್ತೆ ಹೆಚ್ಚಿಸಿದ್ದೇವೆ ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೇಡಿಕೆಯಂತೆ ಅಕಾಡೆಮಿಗಳ ಮೊತ್ತವನ್ನು ಹೆಚ್ಚಿಸುವ ಜೊತೆಗೆ ಕಲಾವಿದರ ಮಾಸಾಶನವನ್ನು 2 ಸಾವಿರ 500 ರೂಗಳಿಂದ 3 ಸಾವಿರ ರೂಪಾಯಿಗೆ ಹೆಚ್ಚಿಸಲಾಗುವುದು ಎಂದು ಅವರು ತಿಳಿಸಿದರು.

<><><>

ರಾಜ್ಯದ ವಿವಿಧ ಅರಣ್ಯ ಮತ್ತು ವನ್ಯಜೀವಿ ತಾಣಗಳ ಸುತ್ತ 16 ಸಾವಿರದ 114 ಚದರ ಕಿಲೋಮೀಟರ್ ಸೂಕ್ಷ್ಮ ಪರಿಸರ ಪ್ರದೇಶವನ್ನು ಈಗಾಗಲೇ ಸಂರಕ್ಷಿಸಲಾಗಿದೆ, ಈ ಮಿತಿಗೆ ಒಳಪಟ್ಟು ಕಸ್ತೂರಿರಂಗನ್ ವರದಿಯನ್ನು ಸಮ್ಮತಿಸಬಹುದು ಎಂಬ ಸಲಹೆಯನ್ನು ಜನಪ್ರತಿನಿಧಿಗಳು ನೀಡಿದ್ದಾರೆ ಎಂದು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಪಶ್ಚಿಮಘಟ್ಟ ಸಂರಕ್ಷಣೆಯ ಹೊಣೆ ಕೇಂದ್ರ ಸರ್ಕಾರದ್ದಾಗಿದ್ದು, ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಮನವಿ ಮಾಡಿದ್ದಾರೆ. ಪಶ್ಚಿಮ ಘಟ್ಟ ಪರಿಸರ ಸೂಕ್ಷ್ಮ ಪ್ರದೇಶ ಕುರಿತು ಕೇಂದ್ರ ಸರ್ಕಾರ 6ನೇ ಅಧಿಸೂಚನೆ ಹೊರಡಿಸಿರುವ ಹಿನ್ನೆಲೆ; ಇದೇ ತಿಂಗಳಲ್ಲಿ ರಾಜ್ಯ ಸರ್ಕಾರ ತನ್ನ ನಿಲುವು ಸಲ್ಲಿಸಬೇಕಿದೆ. ಈ ಹಿನ್ನೆಲೆಯಲ್ಲಿ ಸಚಿವರು 11 ಜಿಲ್ಲೆಗಳ ಜನಪ್ರತಿನಿಧಿಗಳ ಜೊತೆ ಮಹತ್ವದ ಸಭೆ ನಡೆಸಿದರು. ಸಭೆಯಲ್ಲಿ ಪಶ್ಚಿಮಘಟ್ಟ ವ್ಯಾಪ್ತಿಯ 11 ಜಿಲ್ಲೆಗಳ ಸಚಿವರ, ಶಾಸಕರ ಮತ್ತು ಸಂಸತ್ ಸದಸ್ಯರ ಅಭಿಪ್ರಾಯ ಪಡೆಯಲಾಗಿದೆ. ಅಭಿಪ್ರಾಯವನ್ನು ಸಚಿವ ಸಂಪುಟದ ಉಪ ಸಮಿತಿ ಸಭೆಯಲ್ಲಿ ಚರ್ಚಿಸಿ, ಮುಖ್ಯಮಂತ್ರಿಗಳೊಂದಿಗೆ ಸಮಾಲೋಚಿಸಿ, ಸಂಪುಟದ ಅನುಮೋದನೆ ಪಡೆದು ಕೇಂದ್ರಕ್ಕೆ ಸಲ್ಲಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಈಗಾಗಲೇ ರಾಜ್ಯದಲ್ಲಿ 16 ಸಾವಿರದ 114 ಚದರಕಿಲೋಮೀಟರ್ ಪರಿಸರ ಸೂಕ್ಷ್ಮ ಪ್ರದೇಶ ಇದ್ದು, ಇನ್ನೂ ಹೆಚ್ಚಳ ಮಾಡಿದರೆ ಅರಣ್ಯದಂಚಿನ ಜನರ ಬದುಕೇ ದುಸ್ತರವಾಗುತ್ತದೆ ಎಂದು ಹಲವು ಜನಪ್ರತಿನಿಧಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಬಫರ್ ವಲಯವನ್ನು ಶೂನ್ಯಕ್ಕೆ ತರಬೇಕುಎಂದು ಸಲಹೆ ನೀಡಿದ್ದಾರೆ. ಹಲವು ತಲೆಮಾರುಗಳಿಂದ ಅರಣ್ಯ ಪ್ರದೇಶದಲ್ಲೇ ಜೀವನ ನಡೆಸುತ್ತಿರುವವರನ್ನು ಒಕ್ಕಲೆಬ್ಬಿಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯವೂ ಸಭೆಯಲ್ಲಿ ವ್ಯಕ್ತವಾಗಿದೆ.

<><><>

ಗ್ಯಾರಂಟಿ ಯೋಜನೆಗಳಿಂದ ಬಡ ಕುಟುಂಬಗಳಿಗೆ ಆರ್ಥಿಕ ನೆರವು ನೀಡಿ ಸುದೃಢರಾಗಲು ನಮ್ಮ ಸರ್ಕಾರ ಶ್ರಮಿಸುತ್ತಿದೆ ಎಂದು ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಿತಿ ಜನಪರವಾಗಿ ಕೆಲಸ ಮಾಡಲಿದೆ.

ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ. ಗ್ಯಾರಂಟಿ ಯೋಜನೆಗಳ ಯಾವುದೇ ಸಮಸ್ಯೆಯಾದರೂ ಫಲಾನುಭವಿಗಳು ಕೂಡ ದಾಖಲೆಗಳನ್ನು ಸರಿಪಡಿಸಿಕೊಳ್ಳಬೇಕು. ಇದು ದೇಶದ ದೊಡ್ಡ ಯೋಜನೆ ಎಂದು ಹೇಳಿದರು.

<><><>

ಪಂಚ ಗ್ಯಾರಂಟಿ ಯೋಜನೆಗಳನ್ನು ಬಲಗೊಳಿಸುವ ಉದ್ದೇಶದಿಂದ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪ ಅಮರನಾಥ್; ಮೈಸೂರಿನಿಂದ ಮಂಡ್ಯದವರೆಗೆ ಕೆ.ಎಸ್ ಆರ್. ಟಿ.ಸಿ. ಬಸ್‌ನಲ್ಲಿ ತೆರಳಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಅಭಿಪ್ರಾಯ ಸಂಗ್ರಹಿಸಿದರು. ಈ ವೇಳೆ ಶಕ್ತಿ ಯೋಜನೆಯಲ್ಲಿ ಉಚಿತ ಪ್ರಯಾಣಕ್ಕೆ ಆಗಮಿಸಿದ ಮಹಿಳಾ ಪ್ರಯಾಣಿಕರಿಗೆ ಸಿಹಿ ವಿತರಣೆ ಮಾಡಿದರು.

<><><>

ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಬಡವರ ಬಾಳಲ್ಲಿ ಆರ್ಥಿಕ ಸ್ವಾವಲಂಬನೆ ಮೂಡುವುದರೊಂದಿಗೆ ಕ್ರಾಂತಿಕಾರಕ ಬದಲಾವಣೆ ಸಾಧ್ಯವಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು; ಗ್ಯಾರಂಟಿ ಯೋಜನೆಯ ಅನುಷ್ಠಾನದಿಂದ 1 ಕೋಟಿ 10 ಲಕ್ಷ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತಲಾಗಿದೆ ಎಂದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಸುಧಾರಣೆಗಾಗಿ ಸರ್ಕಾರವು ಉನ್ನತ ಮಟ್ಟದ ಸಮಿತಿ ರಚನೆ ಮಾಡುವುದು ಅಗತ್ಯ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ. ಕರ್ನಾಟಕ ವಿಶ್ವವಿದ್ಯಾಲಯದಿಂದ ಗದಗ ಜಿಲ್ಲೆಯ ಕಳಸಾಪುರ ಗ್ರಾಮದಲ್ಲಿ ನಿರ್ಮಿಸಲಾದ ಸ್ನಾತಕೋತ್ತರ ಕೇಂದ್ರದ ನೂತನ ಕಟ್ಟಡವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ವಿಶ್ವವಿದ್ಯಾಲಯಗಳ ವ್ಯವಸ್ಥೆಯಲ್ಲಿ ಶಿಕ್ಷಣದ ಗುಣಮಟ್ಟ ಸುಧಾರಣೆಯಾಗಬೇಕು. ಅದಕ್ಕಾಗಿ ಸರ್ಕಾರ ಉನ್ನತ ಮಟ್ಟದ ಸಮಿತಿಯ ರಚನೆ ಮಾಡುವುದರ ಮೂಲಕ ಗುಣಮಟ್ಟ ಸುಧಾರಣೆಗೆ ಮುಂದಾಗಬೇಕಿದೆ ಎಂದರು.

<><><>

ನಾಡಹಬ್ಬ ಮೈಸೂರು ದಸರಾದ ಮೂಲ ಶ್ರೀರಂಗಪಟ್ಟಣ ದಸರೆಯನ್ನು ಈ ಬಾರಿ ಅಕ್ಟೋಬರ್ 4 ರಿಂದ 7 ವರೆಗೆ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಗುರುವಾರ ಮಂಡ್ಯ ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ನಡೆದ ಶ್ರೀರಂಗಪಟ್ಟಣ ದಸರಾ ಮಹೋತ್ಸವ-2024ರ ಲೋಗೋ ಬಿಡುಗಡೆ ಮಾಡಿ ಮಾತನಾಡಿದ ಅವರು, ಗಂಗಾರತಿಯ ಶೈಲಿಯಲ್ಲಿಯೇ ಕಾವೇರಿ ಆರತಿಯನ್ನು ಕೆ.ಆರ್.ಎಸ್ ನಲ್ಲಿ ಆರಂಭಿಸಲಾಗುವುದು. ಇದನ್ನು ಈ ಬಾರಿಯ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮದಲ್ಲೇ ಪ್ರಾರಂಭಿಸಲು ಯೋಚಿಸಲಾಗುತ್ತಿದೆ ಎಂದು ತಿಳಿಸಿದರು.

<><><>

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷಗಳ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಸರ್ಕಾರದ ಗೊಡ್ಡು ಬೆದರಿಕೆಗೆ ಹೆದರುವುದಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಾಗಮಂಗಲದ ಗಲಭೆ ವಿಚಾರದಲ್ಲಿ ಸೂಕ್ತ ತನಿಖೆಗೆ ಆಗ್ರಹಿಸಲಾಗಿತ್ತು. ಜನರ ನಾಡಿಮಿಡಿತ ಅರಿತು ಸರ್ಕಾರದ ಗಮನಕ್ಕೆ ತರಲಾಗಿತ್ತು. ಈ ಬಗ್ಗೆ ಸರ್ಕಾರ ಗಮನ ಹರಿಸದೇ ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖಲಿಸಿ ವಿರೋಧ ಪಕ್ಷದವರನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು. ವಿಶ್ವವಿದ್ಯಾಲಯಗಳಿಗೆ ನೇಮಕಾತಿ ವಿಚಾರದಲ್ಲಿ ರಾಜ್ಯಪಾಲರಿಗಿದ್ದ ಅಧಿಕಾರವನ್ನು ಸರ್ಕಾರ ಮೊಟಕುಗೊಳಿಸಲು ಮುಂದಾಗಿದ್ದು, ಒಂದು ರೀತಿಯಲ್ಲಿ ಸರ್ಕಾರದಲ್ಲಿ ತುರ್ತು ಪರಿಸ್ಥಿತಿ ಜಾರಿ ಮಾಡುವ ಹುನ್ನಾರ ನಡೆದಿದೆ ಎಂದು ಟೀಕಿಸಿದರು.

<><><>

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರ ಮೇಲೆ ನಿರಂತರವಾಗಿ ಪ್ರಕರಣ ದಾಖಲಿಸುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ದೂರಿದ್ದಾರೆ. ಬೆಂಗಳೂರಿನ ಬಿಜೆಪಿ ಕೇಂದ್ರ ಕಚೇರಿಯಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರುಮಾತನಾಡಿ; ಕಾಂಗ್ರೆಸ್ ಪಕ್ಷ, ಸರ್ಕಾರ ರಚನೆ ಮಾಡಿದ ನಂತರ ಸಾಕ ್ಟ ಹಗರಣಗಳು ನಡೆಯುತ್ತಿವೆ. ವಾಲ್ಮೀಕಿ ಅಭಿವೃದ್ಧಿ ನಿಗಮ, ಮೈಸೂರಿನ ಮುಡಾ ಪ್ರಕರಣದಲ್ಲಿ ಬಡವರ ಹಣವನ್ನು ವಂಚನೆ ಮಾಡಿದ್ದಾರೆ. ನಾಗಮಂಗಲ ಪ್ರಕರಣವನ್ನು ಮುಚ್ಚಿ ಹಾಕುವ ಪ್ರಯತ್ನ ಮಾಡುತ್ತಿದ್ದು, ತನಿಖೆಯನ್ನು ಸ್ಥಗಿತಗೊಳಿಸಿದ್ದಾರೆ ಎಂದು ಟೀಕಿಸಿದರು. ರಾಜ್ಯದ ಹಲವು ಜಿಲ್ಲೆಗಳಲ್ಲಿ ಹಿಂದೂಗಳ ಮೇಲೆ ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ. ನಾಗಮಂಗಲ ಮಾತ್ರವಲ್ಲದೇ ಬೆಳಗಾವಿ, ಕೋಲಾರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಹಿಂದೂಗಳ ಮೇಲೆ ಹಲ್ಲೆ ನಡೆಯುತ್ತಿದೆ. ಆದರೆ, ಈ ಕುಕೃತ್ಯಗಳನ್ನು ನಡೆಸುವವರ ವಿರುದ್ಧ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಈ ಮೂಲಕ ಕಾಂಗ್ರೆಸ್ ಸರ್ಕಾರ ಪ್ರಜಾತಂತ್ರ ವ್ಯವಸ್ಥೆಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

<><><>

ಅತಿ ಹೆಚ್ಚು ಹಾಲು, ಅಕ್ಕಿ, ಸಕ್ಕರೆ ಮತ್ತಿತರ ಉತ್ಪನ್ನಗಳನ್ನು ಉತ್ಪಾದಿಸುವ ಭಾರತ ಈ ಉತ್ಪನ್ನಗಳನ್ನು ಸಂಸ್ಕರಿಸಿ ಮಾರಾಟ ಮಾಡಲು ದೊಡ್ಡ ಅವಕಾಶವನ್ನು ಹೊಂದಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆಯಿಂದ 4 ದಿನಗಳ ವರೆಗೆ ನಡೆಯಲಿರುವ ವರ್ಲ್ಡ್ ಫುಡ್ ಇಂಡಿಯಾ 2024 ರ ಬೃಹತ್ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಬೃಹತ್ ದೇಶೀಯ ಮಾರುಕಟ್ಟೆ ಮತ್ತು ಜಾಗತಿಕ ಬೇಡಿಕೆಯೊಂದಿಗೆ, ನಾವು ನಮ್ಮ ಜನರನ್ನು ಬಡತನದಿಂದ ಮೇಲಕ್ಕೆತ್ತುವುದರ ಜೊತೆಗೆ ಜಗತ್ತಿಗೂ ಆಹಾರವನ್ನು ನೀಡಬಹುದು. ಈ ಕಾರ್ಯಕ್ರಮವು ಆಹಾರ ಸಂಸ್ಕರಣಾ ವಲಯದಲ್ಲಿ ಆವಿ ್ಕಾರ, ತಂತ್ರಜ್ಞಾನ ಮತ್ತು ಸುಸ್ಥಿರತೆಯ ಮೇಳವಾಗಿದ್ದು ಜಾಗತಿಕ ಆಹಾರ ಉದ್ಯಮದಲ್ಲಿ ಭಾರತದ ಪ್ರಾಮುಖ್ಯತೆಯನ್ನು ಇನ್ನ ್ಟ ಹೆಚ್ಚಿಸುತ್ತದೆ ಎಂದರು.

<><><>

ಕೇಂದ್ರ ರೇ ್ಮ ಮಂಡಳಿ ನಡೆಸುತ್ತಿರುವ ಸಂಶೋಧನೆ ಮತ್ತು ಕಾರ್ಯವೈಖರಿ ಉತ್ತಮವಾಗಿದ್ದು, ರೇ ್ಮ ಬೆಳೆಗಾರರು ಮತ್ತು ಕೈಗಾರಿಕೋದ್ಯಮಿಗಳಿಗೆ ಸಹಕಾರಿಯಾಗಿದೆ. ಕೇಂದ್ರ ಸರ್ಕಾರ ಯುವಜನರು, ಮಹಿಳೆಯರು ಮತ್ತು ಕೃಷಿಕರ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ಜವಳಿ ಖಾತೆ ಸಚಿವ ಗಿರಿರಾಜ್ ಸಿಂಗ್ ಹೇಳಿದ್ದಾರೆ. ಕೇಂದ್ರ ರೇ ್ಮ ಮಂಡಳಿಯ ಅಮೃತ ಮಹೋತ್ಸವ ಆಚರಣೆ ಮತ್ತು ರೇ ್ಮ ಕೃಷಿಪಾಲುದಾರರ ಸಭೆಯನ್ನು ಬೆಂಗಳೂರಿನಲ್ಲಿ ಸಸಿ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಈ ಕಾರ್ಯಕ್ರಮವನ್ನು ಎರಡು ದಿನಗಳ ಕಾಲ ಬೆಂಗಳೂರು ಮತ್ತು ಮೈಸೂರಿನಲ್ಲಿ ಆಯೋಜಿಸಲಾಗಿದೆ. ನಂತರ ಸಚಿವರು, ರೇಷ್ಮೆ ಕೇಂದ್ರದ ವಿವಿಧ ವಿಭಾಗಗಳಿಗೆ ಭೇಟಿ ನೀಡಿ, ಮಾಹಿತಿ ಪಡೆದುಕೊಂಡರು. ಈ ವೇಳೆ ಕೇಂದ್ರ ರೇಷ್ಮೆ ಮಂಡಳಿಯ ನಿರ್ದೇಶಕ ಡಾಕ್ಟರ್ ಎಸ್.ಪೆರಿಯಸ್ವಾಮಿ ಮಾತನಾಡಿ; ಅಮೃತ ಮಹೋತ್ಸವ ಹಿನ್ನೆಲೆಯಲ್ಲಿ ರೇಷ್ಮೆ ಕೃಷಿ ಪಾಲುದಾರರ ಸಭೆಯನ್ನು ಕರೆಯಲಾಗಿದ್ದು ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಲು ಅನುಕೂಲವಾಗಲಿದೆ ಎಂದು ತಿಳಿಸಿದರು.

<><><>

ಸಂಸದ ಕೋಟ ಶ್ರೀನಿವಾಸ ಪೂಜಾರಿ ರಾಜೀನಾಮೆಯಿಂದ ತೆರವಾಗಿರುವ ವಿಧಾನ ಪರಿಷತ್ ಚುನಾವಣೆಗೆ ದಿನಾಂಕ ಪ್ರಕಟವಾಗಿದೆ. ಅಕ್ಟೋಬರ್ 21 ರಂದು ಮತದಾನ ನಡೆಯಲಿದ್ದು, 24 ರಂದು ಮತಎಣಿಕೆ ನಡೆಯಲಿದೆ. ನಾಮಪತ್ರ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದ್ದು, ಅಕ್ಟೋಬರ್ 4 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಅಕ್ಟೋಬರ್ 7 ಕಡೆಯ ದಿನವಾಗಿದೆ.

<><><>

ಈಗ ಸಂಕ್ಷಿಪ್ತ ಸುದ್ದಿ

ಬೆಂಗಳೂರು ಮಹಾನಗರ ಪಾಲಿಕೆಯು ಆನ್‌ಲೈನ್ ಡಿಜಿಟಲ್ – ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

<><><>

ಯುವಕರು ಕ್ರೀಡೆಯಲ್ಲಿ ಪಾಲ್ಗೊಂಡು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡಾಗ ಮಾತ್ರ ಬಲಿಷ್ಟ ರಾಷ್ಟ್ರ ನಿರ್ಮಾಣ ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಎಸ್. ವಿ. ಸಂಕನೂರು. ಗದಗದಲ್ಲಿ ಹೇಳಿದ್ದಾರೆ.

<><><>

ಮಂಗನ ಜ್ವರ ಆತಂಕದ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ವಹಿಸಲಾಗಿದೆ. ಜಿಲ್ಲಾ ವೆನ್ಲಾಕ್ ಆಸ್ಪತ್ರೆಯಲ್ಲಿ ಸದ್ಯ ಆರು ಬೆಡ್‌ಗಳನ್ನು ಸಿದ್ಧವಾಗಿ ಇರಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಚ್.ಆರ್.ತಿಮ್ಮಯ್ಯ ತಿಳಿಸಿದ್ದಾರೆ.

<><><>